# All India Radio: Bangalore
# Regional Bulletin In Kannada

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**07.01.2025** **6.40 p.m.**

<><><><>

ಮುಖ್ಯಾಂಶಗಳು

- ಧಾರವಾಡ ಐಐಟಿ ಸೇರಿ ದೇಶದ ಐದು ಹೊಸ ಐಐಟಿಗಳ ಶೈಕ್ಷಣಿಕ, ಮೂಲಸೌಕರ್ಯ ಸಾಮರ್ಥ್ಯ ವಿಸ್ತರಣೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಅಪರೇಷನ್ ಸಿಂಧೂರ-ಭಾರತೀಯ ಸೇನೆಯ ಕಾರ್ಯಾಚರಣೆಗೆ ರಾಜ್ಯ ಸರ್ಕಾರ ಬೆಂಬಲ; ರಾಜ್ಯದೆಲ್ಲೆಡೆ ಸಂಭ್ರಮಾಚರಣೆ
- ರಕ್ಷಣಾ ಸನ್ನದ್ಧತೆ: ಬೆಂಗಳೂರಿನಲ್ಲಿ ರಕ್ಷಣಾ ಅಣಕು ಕವಾಯತು
- . ರಾಜ್ಯದ ಅಪೂರ್ಣ ರೈಲ್ವೆ ಯೋಜನೆಗಳ ಕಾಮಗಾರಿ ಶೀಘ್ರ ಪೂರ್ಣ- ಕೇಂದ್ರ ಸಚಿವ ವಿ.ಸೋಮಣ್ಣ

<><><><>

ಧಾರವಾಡ ಐಐಟಿ ಸೇರಿದಂತೆ ದೇಶದ ಒಟ್ಟು ಐದು ಹೊಸ ಐಐಟಿಗಳ ಶೈಕ್ಷಣಿಕ ಮತ್ತು ಮೂಲಸೌಕರ್ಯ ಸಾಮರ್ಥ್ಯ ವಿಸ್ತರಣೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕೇಂದ್ರ ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ. ಐದು ಹೊಸ ಐಐಟಿಗಳಾದ ಕರ್ನಾಟಕದ ಐಐಟಿ ಧಾರವಾಡ, ಆಂಧ್ರಪ್ರದೇಶದ ಐಐಟಿ ತಿರುಪತಿ, ಕೇರಳದ ಐಐಟಿ ಪಾಲಕ್ಕಾಡ್, ಛತ್ತೀಸಗಢದ ಐಐಟಿ ಭಿಲಾಯಿ, ಜಮ್ಮು ಮತ್ತು ಕಾಶ್ಮೀರದ ಐಐಟಿ ಜಮ್ಮುಗೆ ೨೦೨೫-೨೬ ರಿಂದ ೨೦೨೮-೨೯ ರವರೆಗಿನ ನಾಲ್ಕು ವರ್ಷಗಳ ಅವಧಿಯಲ್ಲಿ ಒಟ್ಟು ೧೧ ಸಾವಿರದ ೮೨೮ ಕೋಟಿ ರೂಪಾಯಿ ಮೀಸಲಿರಿಸಲಾಗಿದೆ. ಈ ಐಐಟಿಗಳಲ್ಲಿ ೧೩೦ ಬೋಧಕರ ಹುದ್ದೆಗಳನ್ನು ಸೃಷ್ಟಿಸಲು ಸಂಪುಟ ಅನುಮೋದನೆ ನೀಡಿದೆ. ಉದ್ಯಮ-ಶೈಕ್ಷಣಿಕ ಸಂಪರ್ಕವನ್ನು ಬಲಪಡಿಸಲು ಐದು ಹೊಸ ಅತ್ಯಾಧುನಿಕ ಸಂಶೋಧನಾ ಕೇಂದ್ರಗಳನ್ನು ಸಹ ಇಲ್ಲಿ ಅಭಿವೃದ್ಧಿಪಡಿಸಲಾಗುತ್ತದೆ.

<><><><>

ಭಾರತೀಯ ಸೇನಾಪಡೆಯು, ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿ ಪರಾಕ್ರಮ ಮೆರೆದಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದ ಪರವಾಗಿ ಭಾರತೀಯ ಸೇನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಭದ್ರತೆ ವಿಷಯದಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಈ ದಾಳಿಯನ್ನು ಪಕ್ಷಾತೀತವಾಗಿ ಎಲ್ಲರೂ

ಬೆಂಬಲಿಸಿದ್ದೇವೆ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ ಗಂಟೆಯಾಗಿದೆ. ರಾಜ್ಯ ಸರ್ಕಾರ ಸೇನೆ ಕೈಗೊಂಡಿರುವ ಕ್ರಮವನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ ಎಂದು ಹೇಳಿದರು. ಆಪರೇಷನ್ ಸಿಂಧೂರ ಮೂಲಕ ಸುಮಾರು ೯ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿದೆ. ಕೇವಲ ಉಗ್ರಗಾಮಿಗಳ ನೆಲೆಗಳ ಮೇಲೆ ಮಾತ್ರ ದಾಳಿ ನಡೆಸಲಾಗಿದೆ. ಭಾರತೀಯ ಸೈನಿಕರು ಉಗ್ರರ ನೆಲೆಗಳನ್ನು ಪತ್ತೆ ಹಚ್ಚಿ, ದಾಳಿ ಮಾಡಿದ್ದು, ಅಮಾಯಕ ಜನರ ಸಾವು-ನೋವು ತಪ್ಪಿಸಿದ್ದಾರೆ. ನಮ್ಮ ಸೈನಿಕರ ಕಾರ್ಯದಕ್ಷತೆ ಅಭಿನಂದನೀಯ. ಈ ದಾಳಿಯನ್ನು ನಾವು ಸ್ವಾಗತಿಸುತ್ತೇವೆ ಎಂದರು. ರಾಜ್ಯದಲ್ಲಿ ಸುರಕ್ಷತೆಯ ಕುರಿತು ಎಲ್ಲಾ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ, (೬೦ ಸೆಕೆಂಡ್ಸ್)**

**<><><><>**

’ಅಪರೇಷನ್ ಸಿಂಧೂರ’ ಮೂಲಕ ಪಾಕಿಸ್ತಾನ ಮತ್ತು ಅಲ್ಲಿನ ಉಗ್ರರ ಅಟ್ಟಹಾಸಕ್ಕೆ ಪ್ರಧಾನಿ ನರೇಂದ್ರ ಮೋದಿ ದಿಟ್ಟ ಪ್ರತ್ಯುತ್ತರ ನೀಡಿದ್ದಾರೆ. ಪ್ರಧಾನಿ ಮೋದಿ ಅವರ ದಿಟ್ಟ ನಾಯಕತ್ವವು ನಮ್ಮ ಯೋಧರಿಗೆ ದೊಡ್ಡ ಶಕ್ತಿ ತಂದುಕೊಟ್ಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಕೋಲಾರದಲ್ಲಿಂದು ಸುದ್ದಿಗಾರರೊಂದಿಗೆ  ಮಾತನಾಡಿದ ಅವರು, ಪಾಕಿಸ್ತಾನದ ಉಗ್ರರ ಅಡಗುದಾಣಗಳ ಮೇಲೆ ನಿನ್ನೆಯಿಂದ ದಾಳಿ ಆರಂಭವಾಗಿದೆ. ನಮ್ಮ ಯೋಧರಿಗೆ ಹೋರಾಟದಲ್ಲಿ ಯಶಸ್ಸು ಸಿಗಲಿ ಎಂದರು.

**ಧ್ವನಿ: ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ (೩೦ ಸೆಕೆಂಡ್ಸ್)**

**<><><><>**

ಆಪರೇಷನ್ ’ಸಿಂಧೂರ’ ಕುರಿತು ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ ಮಾತನಾಡಿ, ಪೆಹಲ್ಗಾಮ್ ದಾಳಿಯಲ್ಲಿ ಉಗ್ರರು ಅಮಾಯಕರ ಮೇಲೆ ದಾಳಿ ಮಾಡಿದ್ದರು. ಕೇಂದ್ರ ಸರ್ಕಾರ ಸಚಿವ ಸಂಪುಟ ತೀರ್ಮಾನ ಮಾಡಿ, ರಾಜತಾಂತ್ರಿಕ ಕ್ರಮ ತೆಗೆದುಕೊಂಡಿತ್ತು. ೯ ಉಗ್ರರ ನೆಲೆಗಳ ಮೇಲೆ ದಾಳಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಈ ಹಿಂದೆ ಕೂಡ ದೇಶದಲ್ಲಿ ಸಾಕಷ್ಟು ಉಗ್ರರ ದಾಳಿಯಾಗಿತ್ತು. ಪ್ರತಿಬಾರಿ ಕೂಡ ಶಾಂತಿ ಮಂತ್ರವನ್ನು ಪಠಿಸಲು ಸಾಧ್ಯವಿಲ್ಲ. ಭಾರತದ ಸಿಂಧೂರವಾದ ಪಾಕ್ ಆಕ್ರಮಿತ ಕಾಶ್ಮೀರವನ್ನು ವಶಪಡಿಸಿಕೊಳ್ಳಲು ಇದು ಸೂಕ್ತ ಸಮಯ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><><><>**

ಪಾಕಿಸ್ತಾನದ ಉಗ್ರರ ತಾಣಗಳ ಮೇಲೆ ಭಾರತದ ದಾಳಿ ’ಅಪರೇಷನ್ ಸಿಂಧೂರ’ ಹಿನ್ನೆಲೆಯಲ್ಲಿ ಬೆಳಗಾವಿಯಲ್ಲಿ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಸಂಭ್ರಮಾಚರಣೆ ನಡೆಸಿದರು.ಮಾಜಿ ಸೈನಿಕರು ಭಾರತ ಧ್ವಜ ಹಿಡಿದು, ಸಿಹಿ ಹಂಚಿ, ಭಾರತೀಯ ಸೇನೆ ಪರ ಘೋಷಣೆ ಕೂಗಿದರು. ಇನ್ನೊಂದೆಡೆ, ಬೆಳಗಾವಿಯ ಬಡಕಲ್ ಗಲ್ಲಿಯ ನಿವಾಸಿಗಳು

ಪಟಾಕಿ ಸಿಡಿಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾಜಿ ಸೈನಿಕ ರಮೇಶ್ ಚೌಗಲಾ ಮಾತನಾಡಿ, ಭಾರತೀಯರು ಸೌಮ್ಯವಾದಿಗಳು. ಆದರೆ ದೇಶಕ್ಕೆ ಆತಂಕ ಉಂಟು ಮಾಡಿದರೆ, ಹೋರಾಟಕ್ಕೂ ಸಿದ್ಧ ಎಂಬುದಕ್ಕೆ ಈ ದಾಳಿ ನಿದರ್ಶನವಾಗಿದೆ. ಪಾಕಿಸ್ತಾನ ಇದನ್ನು ಅರಿತುಕೊಳ್ಳಬೇಕು ಎಂದು ಹೇಳಿದ್ದಾರೆ.

**<><><><>**

'ಅಪರೇಷನ್ ಸಿಂಧೂರ' ಭಾಗವಾಗಿ ಭಾರತೀಯ ಸೈನಿಕರು ಪಾಕಿಸ್ತಾನದ ಉಗ್ರರ ತಾಣಗಳ ಮೇಲೆ ದಾಳಿ ನಡೆಸಿರುವುದನ್ನು ಬೆಂಬಲಿಸಿ ಚನ್ನಪಟ್ಟಣದಲ್ಲಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ಕಾರ್ಯಕರ್ತರು ವಿಜಯೋತ್ಸವ ಆಚರಣೆ ಮಾಡಿದರು. ಇದೇ ವೇಳೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು, ಸಿಹಿ ಹಂಚಿ ವಿಜಯೋತ್ಸವ ಆಚರಣೆ ಮಾಡಿದರು.

**<><><><>**

ಕರ್ನಾಟಕದ ಬೆಂಗಳೂರು ಸೇರಿದಂತೆ ದೇಶದ ೨೪೪ ಜಿಲ್ಲೆಗಳಲ್ಲಿ ಇಂದು ರಕ್ಷಣಾ ಅಣಕು ಕವಾಯತು ನಡೆಸಲಾಯಿತು. ಕೇಂದ್ರ ಗೃಹ ಇಲಾಖೆ, ನಾಗರಿಕರಿಗೆ ಈ ರಕ್ಷಣಾ ಅಣಕು ಕವಾಯತು ಏರ್ಪಡಿಸಿತ್ತು. ಬೆಂಗಳೂರಿನ ಹಲಸೂರಿನಲ್ಲಿ ವಾಯುದಾಳಿ ಎಚ್ಚರಿಕೆ ಸೈರನ್‌ಗಳು ಮೊಳಗಿದವು. ವಿದ್ಯಾರ್ಥಿಗಳು ಮತ್ತು ನಾಗರಿಕರಿಗೆ ವೈಮಾನಿಕ ದಾಳಿ ಅಥವಾ ಬಾಂಬ್ ದಾಳಿಯಂತಹ ತುರ್ತು ಸಂದರ್ಭದಲ್ಲಿ ಹೇಗೆ ಪ್ರತಿಕ್ರಿಯಿಸಬೇಕೆಂಬುದರ ಕುರಿತು ತಿಳಿಸಿಕೊಡಲಾಯಿತು. ಶತ್ರು ದಾಳಿ ಸಂದರ್ಭದಲ್ಲಿ ಕಿಟಿಕಿಗಳಿಂದ ಮನೆ ಹೊರಗೆ ಬೆಳಕು ಹೋಗದಂತೆ ಮುಚ್ಚುವುದು, ವಿದ್ಯುತ್ ಮುಖ್ಯ ಸ್ಥಾವರಗಳು, ಪ್ರಮುಖ ಸಾರಿಗೆ ವ್ಯವಸ್ಥೆಯನ್ನು ರಕ್ಷಿಸುವುದರ ಬಗ್ಗೆ ಕ್ರಮ ವಹಿಸುವುದು ಮತ್ತು ತುರ್ತು ಸಂದರ್ಭದಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪಾರಾಗುವುದರ ಬಗ್ಗೆ ಅಣಕು ಕವಾಯತು ನಡೆಸಲಾಯಿತು.

**<><><><>**

ರಾಜ್ಯದಲ್ಲಿ ಕಳೆದ ೩೦ ವರ್ಷಗಳಿಗೂ ಹೆಚ್ಚು ಕಾಲದಿಂದ ನನೆಗುದಿಗೆ ಬಿದ್ದಿರುವ ಎಲ್ಲ ರೈಲ್ವೆ ಯೋಜನೆಗಳನ್ನು ೩೯ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೧೫ ರಂದು ಗದಗ-ತಳಕವಾಡಿ-ಕುಷ್ಟಗಿ ರೈಲು ಮಾರ್ಗ ಲೋಕಾರ್ಪಣೆಗೊಳ್ಳಲಿದೆ. ಸಿಂಧನೂರು-ರಾಯಚೂರು ರೈಲು ಮಾರ್ಗದ ಕಾಮಗಾರಿ ಈಗಾಗಲೇ ಆರಂಭಗೊಂಡಿದೆ. ಕಾಚಿಗುಡ್ಡ ಮಾರ್ಗದ ಕಾಮಗಾರಿ ಮುಂದಿನ ಒಂದೂವರೆ ತಿಂಗಳಲ್ಲಿ ಮುಕ್ತಾಯಗೊಳ್ಳಲಿದೆ ಎಂದು ಮಾಹಿತಿ ನೀಡಿದರು. ತುಮಕೂರು-ದಾವಣಗೆರೆ ನೇರ ರೈಲು ಮಾರ್ಗ ಯೋಜನೆಯು ೨೦೨೭ ರ ಡಿಸೆಂಬರ್‌ನಲ್ಲಿ ಲೋಕಾರ್ಪಣೆಗೊಳ್ಳಲಿದೆ ಎಂದು ಮಾಹಿತಿ ನೀಡಿದ್ದಾರೆ.

**ಧ್ವನಿ: ಸಚಿವ ವಿ. ಸೋಮಣ್ಣ, (೨೭ ಸೆಕೆಂಡ್ಸ್)**

**<><><><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಕ್ಷೇತ್ರದ ಶ್ರೀ ಸುಬ್ರಹ್ಮಣ್ಯಸ್ವಾಮಿ ದೇವಾಲಯದಲ್ಲಿ ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮಾಂಗಲ್ಯ ಭಾಗ್ಯ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗಿತು. ವಿವಾಹ ಕಾರ್ಯಕ್ರಮದಲ್ಲಿ ೬೬ ಜೋಡಿಗಳು ದಾಂಪತ್ಯಕ್ಕೆ ಕಾಲಿರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ, ಸಾಮೂಹಿಕ ವಿವಾಹಗಳು ಬಡಜನರಿಗೆ ವರದಾನವಾಗಲಿವೆ. ದಾಂಪತ್ಯಕ್ಕೆ ಕಾಲಿರಿಸಿರುವ ದಂಪತಿಗಳು, ಸಂಸಾರದಲ್ಲಿ ಬರುವ ಕಷ್ಟ-ಸುಖಗಳನ್ನು ಸಮಾನವಾಗಿ ಸ್ವೀಕರಿಸಿ, ಮಕ್ಕಳಿಗೆ ಉತ್ತಮ ಭವಿಷ್ಯ ರೂಪಿಸಿ, ದೇಶದ ಸತ್ಪ್ರಜೆಗಳನ್ನಾಗಿ ರೂಪಿಸಬೇಕೆಂದು ಹಾರೈಸಿದರು. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾಗಿದ್ದ ನಿರ್ಮಲಾನಂದನಾಥ ಮಹಾಸ್ವಾಮಿ ಉಪಸ್ಥಿತದ್ದರು.

**<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>**